ಸಿಸಿ ನಂ. 58/2023 ಪಿಡಬ್ಲೂ :1

ದಿನಾಂಕಃ 23-02-2024 ರಂದು ಸಾಕ್ಷಿಯನ್ನು ಪುನಃ ಕರೆಸಿ ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆಃ ಪಿರ್ಯಾದುದಾರರ ಪರವಾಗಿಃ ಶ್ರೀ ಪಿ ಜಿ ಹೆಚ್ ವಕೀಲರಿಂದಃ**

ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತದೆ.

2. ನ್ಯಾಯಾಲಯದ ಮುಂದೆ ಇರುವ ಆರೋಪಿಯನ್ನು ಸಾಕ್ಷಿ ನೋಡಿ ಗುರುತಿಸಿರುತ್ತಾರೆ . ಎರಡು ಠರಾವುಗಳ ಯಥಾ ನಕಲುಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ನಿಪಿ -1 ಮತ್ತು 2 ಎಂದು ಗುರುತಿಸಲಾಯಿತು. ಆರೋಪಿಯು ನೀಡಿದ ಚೆಕ್ ಹಾಜರು ಪಡಿಸಿದ್ದು ಅದನ್ನು ನಿಪಿ-3 ಎಂದು ಗುರುತಿಸಲಾಯಿತು. ನಿಪಿ-3 ರಲ್ಲಿರುವ ಸಹಿ ಆರೋಪಿಯ ಸಹಿಯಾಗಿರುತ್ತದೆ . ಸದರಿ ಸಹಿಯನ್ನು ನಿಪಿ-3(ಎ) ಎಂದು ಗುರುತಿಸಲಾಯಿತು. ಬ್ಯಾಂಕನವರು ಕೊಟ್ಟಿರುವ ಮೆಮೊವನ್ನು ಹಾಜರು ಪಡಿಸಿದ್ದು ಅದನ್ನು ನಿಪಿ -4 ಎಂದು ಗುರುತಿಸಲಾಯಿತು. ನಾವು ನಮ್ಮ ವಕೀಲರ ಮುಖಾಂತರ ಆರೋಪಿಗೆ ನೀಡಿದ ನೋಟಿಸಿನ ಕಚೇರಿ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-5 ಎಂದು, ಅಂಚೆ ರಸೀದಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-6 ಎಂದು ಗುರುತಿಸಲಾಯಿತು. ಸದರಿ ನೋಟಿಸನ್ನು ಆರೋಪಿಯು ಸ್ವಿಕರಿಸದ ಕಾರಣ ವಾಪಸ್ಸು ಬಂದಿದ್ದು ಅದನ್ನು ಅಂಚೆ ಲಕೋಟೆ ಸಮೇತವಾಗಿ ಹಾಜರು ಪಡಿಸಿರುತ್ತೇವೆ . ಸದರಿ ಅಂಚೆ ಲಕೋಟೆಯನ್ನು ತೆರೆದ ನ್ಯಾಯಾಲಯದಲ್ಲಿ ತೆರೆದು ನೋಡಲಾಯಿತು. ಸದರಿ ಅಂಚೆ ಲಕೋಟೆಯನ್ನು ನಿಪಿ -7 ಎಂದು, ಅದರ ಒಳಗೆ ಇದ್ದ ನೋಟಿಸನ್ನು ನಿಪಿ-7(ಎ) ಎಂದು ಗುರುತಿಸಲಾಯಿತು.

( ಮುಂದುವರೆದ ಮುಖ್ಯ ವಿಚಾರಣೆ  ಕೋರಿಕೆಯ ಮೇರೆಗೆ   ಮುಂದೂಡಲಾಯಿತು)

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯಂತೆ ಬೆರಳಚ್ಚು ಮಾಡಿಸಲಾಯಿತು.)

ಓ. ಹೇ. ಕೇ. ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಧಾನ ಪ್ರ.ದ.ನ್ಯಾದಂ., ಕುಮಟಾ.